## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನ ಪ್ರಧಾನ್ ಮಂತ್ರಿ ಆವಾಸ್-ಗ್ರಾಮೀಣ ಯೋಜನೆಯಡಿಯಲ್ಲಿ ಕೇಂದ್ರದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಕೇಂದ್ರ ಸರ್ಕಾರದ ಆದೇಶ ಸಂಖ್ಯೆ:**No.J-12022/01/2016-RH(A/c)-1A/1B-Karnataka**
2. ಆರ್ಥಿಕ ಇಲಾಖೆಯ Credit Confirmation Slips
   - ಅ) CCS No.FD 44 BGL 2016 dated: 20.10.2016.
   - ಆ) CCS No.FD 44 BGL 2016 dated: 20.10.2016.
3. ಪತ್ರ ಸಂಖ್ಯೆ: ಎಂ.ಡಿ. ಆರ್‌ಜಿಆರ್‌ಹೆಚ್‌ಸಿಎಲ್ 47 ಜಿಆರ್‌ಒ 15 2016, ದಿ:07.11.2016

**ಪ್ರಸ್ತಾವನೆ:-**

ಓದಲಾದ (1)ರ ಆದೇಶಗಳಲ್ಲಿ 2016-17ನೇ ಸಾಲಿನ ಪ್ರಧಾನ್ ಮಂತ್ರಿ ಆವಾಸ್-ಗ್ರಾಮೀಣ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ಪ್ರಥಮ ಕಂತಿಗೆ ಬಿಡುಗಡೆ ಮಾಡಬೇಕಾದ ಅನುದಾನ ರೂ26049.10ಲಕ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ರೂ.15028.47ಲಕ್ಷಗಳನ್ನು ನೇರವಾಗಿ ಆರ್ಥಿಕ ಇಲಾಖೆಗೆ ಬಿಡುಗಡೆ ಮಾಡಿರುತ್ತದೆ.

2016-17ನೇ ಸಾಲಿನ ಪ್ರಧಾನ್ ಮಂತ್ರಿ ಆವಾಸ್-ಗ್ರಾಮೀಣ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಪ್ರಥಮ ಕಂತಿನ ಅನುದಾನ ರೂ15028.47 ಲಕ್ಷಗಳಿಗೆ ಅನುಗುಣವಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಶೇ.40ರ ಪ್ರಥಮ ಕಂತಿನ ಅನುದಾನ ರೂ.10019.04 ಲಕ್ಷಗಳೂ ಸೇರಿದಂತೆ ಒಟ್ಟು ರೂ. 25047.51ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಓದಲಾದ (2)ರಲ್ಲಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊತ್ತ ರೂ. 15028.47ಲಕ್ಷಗಳು ಜಮೆಯಾದ ಬಗ್ಗೆ ಆರ್ಥಿಕ ಇಲಾಖೆಯು Credit Confirmation Slip ಹೊರಡಿಸಿರುತ್ತದೆ.

ಕೇಂದ್ರ ಸರ್ಕಾರದ ಪಾಲಿನ ಅನುದಾನ ರೂ.15028.47ಲಕ್ಷಗಳು ಮತ್ತು ರಾಜ್ಯದ ಪಾಲಿನ ಅನುದಾನ ರೂ. 10019.04ಲಕ್ಷಗಳು ಸೇರಿ ಒಟ್ಟು ರೂ. 25047.51ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಇವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ವಇ 66 ಹೆಚ್‌ಎಹೆಚ್ 2016, ಬೆಂಗಳೂರು, ದಿನಾಂಕ:7ನೇ ಜನವರಿ 2017**

ಮೇಲಿನ ಪ್ರಸ್ತಾವನೆಯ ಹಿನ್ನೆಲೆಯಲ್ಲಿ, 2016-17ನೇ ಸಾಲಿನ ಆಯವ್ಯಯದಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ ಅನುಷ್ಠಾನಗೊಳ್ಳಲಿರುವ ಕೇಂದ್ರ ಸರ್ಕಾರದ ಪ್ರಧಾನ್ ಮಂತ್ರಿ ಆವಾಸ್-ಗ್ರಾಮೀಣ ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ 2216-80-198-6-02-300 (ಯೋಜನೆ) ರಡಿಯಲ್ಲಿ ರೂ.15028.47ಲಕ್ಷಗಳ (ನೂರ ಐವತ್ತು ಕೋಟಿ ಇಪ್ಪತ್ತೆಂಟು ಲಕ್ಷದ ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮಕ್ಕೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

1. ಸದರಿ ಸದರಿ ಅನುದಾನವು ಯೋಜನಾ ವೆಚ್ಚವಾಗಿದ್ದು, ಪ್ರಧಾನ್ ಮಂತ್ರಿ ಆವಾಸ್ (ಗ್ರಾಮೀಣ) ಯೋಜನೆಯ ಮಾರ್ಗಸೂಚಿಯಂತೆ ಅನುಮೋದಿಸಲ್ಪಟ್ಟ ವಸತಿ ನಿರ್ಮಾಣಕ್ಕೆ ಮಾತ್ರ ಈ ಮೊಬಲಗನ್ನು ಉಪಯೋಗಿಸತಕ್ಕದ್ದು;

.2..

2. ಈ ಯೋಜನೆಯಡಿ 2016-17ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವನ್ನು ನೂರಕ್ಕೆ ನೂರರಷ್ಟು ಖರ್ಚು ಮಾಡುವುದು ಕಡ್ಡಾಯವಾಗಿರುತ್ತದೆ;
3. ಮೇಲ್ಕಂಡಂತೆ ಬಿಡುಗಡೆಯಾದ ಅನುದಾನದ ಬಗ್ಗೆ ಸರ್ಕಾರದ ಉಪ ಕಾರ್ಯದರ್ಶಿ, ವಸತಿ ಇಲಾಖೆ, ಇವರ ಮೇಲು ಸಹಿಯೊಂದಿಗೆ ಖಜಾನೆಗೆ ಬಿಲ್ಲು ಸಲ್ಲಿಸುವುದು.
4. ಈ ಮೊತ್ತವನ್ನು ಸಿ.ಟಿ.ಎಸ್-8ರ ಅನುದಾನದ ಬಿಲ್ಲಿನಲ್ಲಿ ಸೆಳೆಯಲು ಅನುಮೋದಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 741 ವೆಚ್ಚ-9/2015, ದಿನಾಂಕ:31.12.2016ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಶಿವಕುಮಾರಸ್ವಾಮಿ ಸಿ.ಎಸ್.) 7/1
ಸರ್ಕಾರದ ಅಧೀನ ಕಾರ್ಯದರ್ಶಿ-2
ವಸತಿ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(G&SSA) (E&RSA) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು(ಎ ಮತ್ತು ಇ) ಕರ್ನಾಟಕ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬೆಂಗಳೂರು.
4. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ಬೆಂಗಳೂರು-01.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಸಹ ನಿರ್ದೇಶಕರು, ಖಜಾನೆ ಗಣಕಜಾಲ ಕೇಂದ್ರ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಜಂಟಿ ಕಾರ್ಯದರ್ಶಿ ಹಾಗೂ ವಿಶೇಷಾಧಿಕಾರಿ, ಬ್ಯಾಂಕಿಂಗ್, ಆರ್ಥಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಜಂಟಿ ನಿರ್ದೇಶಕರು, (ಯೋಜನೆ) ವಸತಿ ಮತ್ತು ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಉಪಕಾರ್ಯದರ್ಶಿ (ಆ&ಸಂ), ಆರ್ಥಿಕ ಇಲಾಖೆ, 2ನೇ ಮಹಡಿ, ವಿಧಾನಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಸರ್ಕಾರದ ಉಪಕಾರ್ಯದರ್ಶಿ, ವಸತಿ, ನಗರಾಭಿವೃದ್ಧಿ, ಕಾನೂನು ಮತ್ತು 'ಇ'ಆಡಳಿತ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನ ಸೌಧ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ-ಗ್ರೇಡ್-1, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.